ಹಂಚಿಕೆಯಾಗದೇ ಉಳಿದ ಸ್ವತ್ತುಗಳನ್ನು ಹಂಚಿಕೆ ಮಾಡಲು ಸಾರ್ವಜನಿಕ ಪತ್ರಿಕಾ ಪ್ರಕಟಣೆ ಮೂಲಕ ಸಾರ್ವಜನಿಕರ ಗಮನಕ್ಕೆ ತರಲಾಗುವುದು.

ಈ) ಅವಕಾಶವಿರುವುದಿಲ್ಲ.

ಉ) ಪ್ರಸ್ತುತ, ಆ ರೀತಿ ಯಾವುದೇ ಬಡಾವಣೆ ಇರುವುದಿಲ್ಲ.

ಹಾಸನದ ಕೆ.ಎಸ್.ಆರ್.ಪಿ. ಸಿಬ್ಬಂದಿಗೆ ವಸತಿ ಗೃಹಗಳನ್ನು ನೀಡುವುದು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 207 (161)

ಸದಸ್ಯರ ಹೆಸರು : ಶ್ರೀ ಹೆಚ್.ಡಿ. ರೇವಣ್ಣ (ಹೊಳೇನರಸೀಪುರ)

ಉತ್ತರಿಸುವ ಸಚಿವರು : ಶ್ರೀ ಆರ್. ಅಶೋಕ್ (ಗೃಹ ಮತ್ತು ಸಾರಿಗೆ ಸಚಿವರು)

ಪ್ರಶ್ನೆಗಳು:–

ಅ) ಹಾಸನ ನಗರದಲ್ಲಿ ಕೆ.ಎಸ್.ಆರ್.ಪಿ ತುಕಡಿಯ ಸಿಬ್ಬಂದಿ ವರ್ಗದವರಿಗೆ ವಸತಿಗೃಹಗಳನ್ನು ನಿರ್ಮಿಸಲು ಜಮೀನನ್ನು ವಶಪಡಿಸಿಕೊಳ್ಳಲಾಗಿದೆಯೇ? ಹಾಗಿದ್ದಲ್ಲಿ, ವಶಪಡಿಸಿಕೊಳ್ಳಲಾಗಿರುವ ಜಮೀನಿನ ವಿಸ್ತೀರ್ಣವೆಷ್ಟು?

ಆ) ಕಳೆದ 4 ವರ್ಷಗಳಿಂದಲೂ ವಸತಿ ಗೃಹಗಳನ್ನು ನಿರ್ಮಿಸದೇ ಯೋಜನೆಯ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು? ಪೂರ್ಣ ಮಾಹಿತಿ ನೀಡುವುದು.

ಉತ್ತರಗಳು:–

ಅ) ಹಾಸನ ನಗರದಲ್ಲಿ ಕೆ.ಎಸ್.ಆರ್.ಪಿ. ತುಕುಡಿಯ ಸಿಬ್ಬಂದಿ ವರ್ಗದವರಿಗೆ ವಸತಿ ಗೃಹಗಳನ್ನು ನಿರ್ಮಿಸಲು ಪ್ರತ್ಯೇಕವಾಗಿ ಜಮೀನು ವಶಪಡಿಸಿಕೊಂಡಿರುವುದಿಲ್ಲ.

ಆದರೆ, ಹಾಸನ ನಗರದ ಎಸ್.ಎಂ.ಕೃಷ್ಣ ನಗರ ಬಡಾವಣೆಗಾಗಿ

ಹಾಸನ ನಗರಾಭಿವೃದ್ಧಿ ಪ್ರಾಧಿಕಾರವು ಸ್ವಾಧೀನಪಡಿಸಿಕೊಂಡ 453 ಎಕರೆ ಜಮೀನಿನಲ್ಲಿ 200 ಎಕರೆ ಜಮೀನು ಕೆ.ಎಸ್.ಆರ್.ಪಿ. ಬೆಟಾಲಿಯನ್ ಸ್ಥಾಪಿಸಲು ಹಾಸನ ನಗರಾಭಿವೃದ್ಧಿ ಪ್ರಾಧಿಕಾರ ಇವರಿಗೆ ರೂ. 8.00 ಕೋಟಿ ಪಾವತಿಸಲಾಗಿದೆ.

ಆ) ಬಂದಿದೆ. ಆದರೆ, ಸದರಿ ಜಮೀನಿಗೆ ಸಂಬಂಧಿಸಿದ ರೈತರು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಿರುವುದರಿಂದ ಹಾಸನ ನಗರಾಭಿವೃದ್ಧಿ ಪ್ರಾಧಿಕಾರ ಇವರು ಎಸ್.ಎಂ. ಕೃಷ್ಣ ನಗರದಲ್ಲಿ ಹಂಚಿಕೆಯಾದ 200 ಎಕರೆ ಜಮೀನನ್ನು ಹಸ್ತಾಂತರಿಸಿರುವುದಿಲ್ಲ. ಸದರಿ ಜಮೀನಿನ ಬಗ್ಗೆ ನ್ಯಾಯಾಲಯದಲ್ಲಿ ದಾವೆ ಬಾಕಿ ಇರುವುದರಿಂದ ಈ ಸ್ಥಳದಲ್ಲಿ ಯಾವುದೇ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಆಗಿರುವುದಿಲ್ಲ.

ಮೈಸೂರು ನಗರದಲ್ಲಿನ ವಸತಿ ಯೋಜನೆಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 209 (136)

ಸದಸ್ಯರ ಹೆಸರು : ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ)

ಉತ್ತರಿಸುವ ಸಚಿವರು : ಶ್ರೀ ವಿ. ಸೋಮಣ್ಣ (ಮಾನ್ಯ ವಸತಿ ಸಚಿವರು)

ಪ್ರಶ್ನೆಗಳು:–

ಅ) ಮೈಸೂರು ನಗರದಲ್ಲಿ ಬಡವರಿಗಾಗಿ ಎಲ್ಲೆಲ್ಲಿ ಯಾವ ಯಾವ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಿಸಲಾಗುತ್ತಿದೆ? (ಯೋಜನಾವಾರು ತಗುಲಿರುವ ವೆಚ್ಚದ ಮಾಹಿತಿ ಒದಗಿಸುವುದು);

ಆ) ಈ ಮನೆಗಳನ್ನು ಪೂರ್ಣಗೊಳಿಸಿ ಫಲಾನುಭವಿಗಳಿಗೆ ವಿತರಿಸುವುದು ಯಾವಾಗ? ಪ್ರಸ್ತುತ ಯಾವ ಹಂತದಲ್ಲಿದೆ?

ಇ) ಉಳಿಕೆ ವಸತಿ ರಹಿತರಿಗೆ, ಬಡವರಿಗೆ ಮನೆ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? ಮಾಹಿತಿ ಒದಗಿಸುವುದು;